All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

10.12.2025 19.35 PM

***************

ಮುಖ್ಯಾಂಶಗಳು

- ಲೋಕಸಭೆಯಲ್ಲಿಂದು ಚುನಾವಣಾ ಸುಧಾರಣೆ ಕುರಿತು ವಿಸ್ತೃತ ಚರ್ಚೆ; ಮತದಾರರ ಪಟ್ಟಿ ಪರಿಷ್ಕರಣೆ ಚುನಾವಣಾ ಆಯೋಗದ ಸಾಂವಿಧಾನಿಕ ಜವಾಬ್ದಾರಿ - ಗೃಹ ಸಚಿವ ಅಮಿತ್ ಶಾ
- ರೈಲಿನಲ್ಲಿ ಮಹಿಳಾ ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
- ಹತ್ತು ವರ್ಷಗಳಲ್ಲಿ ದ್ವಿಗುಣಗೊಂಡ ಭಾರತದ ಮೀನು ರಫ್ತು; ಕಳೆದ ಸಾಲಿನಲ್ಲಿ ೧೯೭ ಲಕ್ಷ ಟನ್‌ಗಳಿಗೆ ಏರಿಕೆ
- ಟಿ-೨೦ ಕ್ರಿಕೆಟ್; ನಾಳೆ ಚಂಡೀಗಢದಲ್ಲಿ ಭಾರತ-ದಕ್ಷಿಣ ಆಫ್ರಿಕಾ ನಡುವಿನ ಎರಡನೇ ಪಂದ್ಯ

***************

ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಜವಾಬ್ದಾರಿಯನ್ನು ಸಂವಿಧಾನವು ಚುನಾವಣಾ ಆಯೋಗಕ್ಕೆ ನೀಡುತ್ತದೆ ಮತ್ತು ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ, ಚುನಾವಣಾ ಆಯೋಗದ ಜವಾಬ್ದಾರಿಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಹೇಳಿದ್ದಾರೆ.

ಇಂದು ಲೋಕಸಭೆಯಲ್ಲಿ ಚುನಾವಣಾ ಸುಧಾರಣೆಯ ಕುರಿತಾದ ಚರ್ಚೆಯ ಸಂದರ್ಭದಲ್ಲಿ ಎಸ್‌ಐಆರ್ ಮೇಲಿನ ವಿರೋಧದ ಆರೋಪಗಳನ್ನು ನಿರಾಕರಿಸಿದ ಅವರು, ವಿರೋಧ ಪಕ್ಷಗಳು ವಿಶೇಷವಾಗಿ ಕಾಂಗ್ರೆಸ್ ಎಸ್‌ಐಆರ್ ವಿಷಯದ ಬಗ್ಗೆ ಸುಳ್ಳುಗಳನ್ನು ಹರಡಿವೆ ಮತ್ತು ದೇಶ, ಸರ್ಕಾರ ಮತ್ತು ಚುನಾವಣಾ ಆಯೋಗದ ಪ್ರತಿಷ್ಠೆಯನ್ನು ಹಾಳು ಮಾಡುತ್ತಿವೆ ಎಂದು ಆರೋಪಿಸಿದರು.

ಧ್ವನಿ: ಅಮಿತ್ ಶಾ

ಚರ್ಚೆಯಲ್ಲಿ ಭಾಗವಹಿಸಿದ ಕಾಂಗ್ರೆಸ್ ನಾಯಕ ಕೆ.ಸಿ. ವೇಣುಗೋಪಾಲ್, ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಭೂತ ತತ್ವವಾಗಿದ್ದು, ಚುನಾವಣಾ ಆಯೋಗ ಪಕ್ಷಪಾತ ಮಾಡುತ್ತಿದೆ ಎಂದು ಅವರು ಆರೋಪಿಸಿದರು.

೨೦೨೪ ರ ಲೋಕಸಭಾ ಚುನಾವಣೆಗೆ ಸ್ವಲ್ಪ ಮೊದಲು, ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸುವಲ್ಲಿ ವಿಳಂಬವಾಗಿದೆ ಎಂದು ಉಲ್ಲೇಖಿಸಿ ಕಾಂಗ್ರೆಸ್ ಪಕ್ಷದ ಖಾತೆಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಅವರು ಆರೋಪಿಸಿದರು.

ಬಿಹಾರದಲ್ಲಿ ಮತದಾರರನ್ನು ದೊಡ್ಡ ಪ್ರಮಾಣದಲ್ಲಿ ಪಟ್ಟಿಯಿಂದ ತೆಗೆದ ಬಗ್ಗೆಯೂ ಅವರು ಮಾತನಾಡಿದರು.

ಬಿಜೆಪಿ ನಾಯಕ ರವಿಶಂಕರ್ ಪ್ರಸಾದ್, ವಿರೋಧ ಪಕ್ಷಗಳು ಸೋತಾಗಲೆಲ್ಲಾ ಅವರು ಚುನಾವಣಾ ಪ್ರಕ್ರಿಯೆಯ ಬಗ್ಗೆ ಪ್ರಶ್ನೆಗಳನ್ನು ಎತ್ತುತ್ತಾರೆ.

ಬಿಹಾರದಲ್ಲಿ ಕಾಂಗ್ರೆಸ್ ಹಲವಾರು ರ್‍ಯಾಲಿಗಳನ್ನು ನಡೆಸಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಯನ್ನು ಟೀಕಿಸಿದ ನಂತರವೂ, ಅದು ವಿಧಾನಸಭಾ ಚುನಾವಣೆಯಲ್ಲಿ ಕೆಲವೇ ಸ್ಥಾನಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದೆ. ಕಾಂಗ್ರೆಸ್ ಪಕ್ಷ ಮತ್ತು ಅವರ ಮಿತ್ರಪಕ್ಷಗಳಿಗೆ ಆತ್ಮಾವಲೋಕನದ ಅವಶ್ಯಕತೆಯಿದೆ ಮತ್ತು ಅವರು ಚುನಾವಣಾ ಆಯೋಗದತ್ತ ಬೊಟ್ಟು ಮಾಡಬಾರದು ಎಂದು ಪ್ರಸಾದ್ ಹೇಳಿದರು.

ಜನರಿಗೆ ಕಿರುಕುಳ ನೀಡಲು ಎಸ್‌ಐಆರ್ ನಡೆಸಲಾಗುತ್ತಿದೆ ಮತ್ತು ಇದು ರಾಜಕೀಯ ಪ್ರೇರಿತವಾಗಿದೆ. ಪಶ್ಚಿಮ ಬಂಗಾಳದಲ್ಲಿ ಈ ಪ್ರಕ್ರಿಯೆಯಿಂದಾಗಿ ಬಿಎಲ್‌ಒಗಳು ಜೀವ ಕಳೆದುಕೊಳ್ಳುತ್ತಿದ್ದಾರೆ. ಬಾಂಗ್ಲಾದೇಶಿಗಳು ಮತ್ತು ರೋಹಿಂಗ್ಯಾಗಳು ಭಾರತಕ್ಕೆ ಪ್ರವೇಶಿಸುತ್ತಿದ್ದರೆ, ಅದು ಸರ್ಕಾರದ ವೈಫಲ್ಯ ಎಂದು ತೃಣಮೂಲ ಕಾಂಗ್ರೆಸ್‌ನ ಶತಾಬ್ದಿ ರಾಯ್ ಆರೋಪಿಸಿದರು.

ಸಮಾಜವಾದಿ ಪಕ್ಷದ ಡಿಂಪಲ್ ಯಾದವ್, ಚುನಾವಣಾ ಆಯೋಗವು ನಿಷ್ಪಕ್ಷಪಾತವಾಗಿರಬೇಕು. ಚುನಾವಣಾ ಆಯೋಗವು ಸರ್ಕಾರದ ಆದೇಶದ ಮೇರೆಗೆ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಆರೋಪಿಸಿದರು.

ಕೇಂದ್ರ ಸಚಿವೆ ಮತ್ತು ಅಪ್ನಾ ದಳ-ಎಸ್ ನಾಯಕಿ ಅನುಪ್ರಿಯಾ ಪಟೇಲ್, ಎಸ್‌ಐಆರ್ ದೇಶದಲ್ಲಿ ಅಕ್ರಮವಾಗಿ ವಾಸಿಸುತ್ತಿರುವವರನ್ನು ಗುರುತಿಸುವುದು ಒಂದು ಪ್ರಮುಖ ವಿಷಯವಾಗಿದೆ ಎಂದು ಹೇಳಿದರು. ಸಂಸತ್ತಿನಲ್ಲಿ ಈ ವಿಷಯವನ್ನು ಎತ್ತುವ ಮೂಲಕ ಕಾಂಗ್ರೆಸ್ ಚುನಾವಣೆಯಲ್ಲಿನ ತನ್ನ ಸೋಲನ್ನು ಮರೆಮಾಡಲು ಪ್ರಯತ್ನಿಸುತ್ತಿದೆ ಎಂದು ಅವರು ಹೇಳಿದರು.

ಚುನಾವಣಾ ಆಯೋಗದ ಕಾರ್ಯನಿರ್ವಹಣೆಯನ್ನು ದುರ್ಬಲಗೊಳಿಸಲು ವಿರೋಧ ಪಕ್ಷವು ಒಳನುಸುಳುವವರನ್ನು ಬೆಂಬಲಿಸುತ್ತಿದೆ ಎಂದು ಅವರು ಆರೋಪಿಸಿದರು.

***************

ಮಹಿಳಾ ಪ್ರಯಾಣಿಕರ ಸುರಕ್ಷತೆ ಮತ್ತು ಭದ್ರತೆಗಾಗಿ ರೈಲ್ವೆ ಜಿಆರ್‌ಪಿಯೊಂದಿಗೆ ಸಮನ್ವಯದಿಂದ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಇಂದು ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ವೈಷ್ಣವ್, ಮೇರಿ ಸಹೇಲಿ ಉಪಕ್ರಮದಡಿಯಲ್ಲಿ, ದೂರದ ರೈಲುಗಳಲ್ಲಿ ಏಕಾಂಗಿಯಾಗಿ ಪ್ರಯಾಣಿಸುವ ಮಹಿಳಾ ಪ್ರಯಾಣಿಕರ ಸಂಪೂರ್ಣ ಪ್ರಯಾಣದ ಸುರಕ್ಷತೆಗೆ ಹೆಚ್ಚಿನ ಗಮನ ನೀಡಲಾಗಿದೆ ಎಂದು ಹೇಳಿದರು.

ಹಲವಾರು ಬೋಗಿಗಳು ಮತ್ತು ರೈಲು ನಿಲ್ದಾಣಗಳಲ್ಲಿ ಒದಗಿಸಲಾದ ಸಿಸಿಟಿವಿ ಕ್ಯಾಮೆರಾಗಳ ಮೂಲಕ ಕಣ್ಗಾವಲು ಇಡಲಾಗಿದೆ. ಮಹಿಳೆಯರಿಗೆ ಮೀಸಲಾದ ಕಂಪಾರ್ಟ್‌ಮೆಂಟ್‌ಗೆ ಪುರುಷ ಪ್ರಯಾಣಿಕರ ಪ್ರವೇಶದ ವಿರುದ್ಧ ಕಾರ್ಯಾಚರಣೆಗಳನ್ನು ನಡೆಸಲಾಗುತ್ತದೆ ಮತ್ತು ಅಪರಾಧಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಹೇಳಿದರು.

***************

ಕಳೆದ ಹತ್ತು ವರ್ಷಗಳಲ್ಲಿ ಭಾರತದ ಮೀನು ರಫ್ತು ದ್ವಿಗುಣಗೊಂಡು ೬೨ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಾಗಿದೆ ಎಂದು ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗೆ ಉತ್ತರಿಸಿದ ಅವರು, ೨೦೧೩-೧೪ರಲ್ಲಿ ದೇಶದ ಮೀನು ರಫ್ತು ೩೦ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದೆ. ೨೦೧೩-೧೪ರಲ್ಲಿ ೯೫.೮ ಲಕ್ಷ ಟನ್‌ಗಳಷ್ಟಿದ್ದ ಮೀನು ಉತ್ಪಾದನೆಯು ೨೦೨೩-೨೪ರಲ್ಲಿ ೧೯೮ ಲಕ್ಷ ಟನ್‌ಗಳಿಗೆ ಏರಿದೆ ಎಂದು ಹೇಳಿದರು.

ದೇಶದಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸುವ ಮೂಲಕ ಮೀನುಗಾರರ ಆದಾಯವು ಗಮನಾರ್ಹವಾಗಿ ಸುಧಾರಿಸಿದೆ. ನರೇಂದ್ರ ಮೋದಿ ಸರ್ಕಾರವು ಮೀನುಗಾರರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತರುತ್ತಿದೆ ಎಂದು ಅವರು ಹೇಳಿದರು.

***************

ಕಳೆದ ಐದು ವರ್ಷಗಳಿಂದ ನಿರ್ಭಯಾ ನಿಧಿಗೆ ೩ ಸಾವಿರದ ೩೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ಕೇಂದ್ರ ಸರ್ಕಾರ ಹಂಚಿಕೆ ಮಾಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆಯ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಇಂದು ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ದೇಶದಲ್ಲಿ ಮಹಿಳೆಯರು ಮತ್ತು ಹುಡುಗಿಯರ ಸುರಕ್ಷತೆ ಮತ್ತು ಭದ್ರತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಕೇಂದ್ರ ಸರ್ಕಾರ ನಿರ್ಭಯಾ ನಿಧಿಯನ್ನು ಸ್ಥಾಪಿಸಿದೆ. ನಿರ್ಭಯಾ ನಿಧಿಯ ಚೌಕಟ್ಟಿನ ಅಡಿಯಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ ಎಂದು ಸಚಿವರು ಹೇಳಿದರು.

ವರ್ಷದ ಅವಶ್ಯಕತೆಗಳನ್ನು ಅವಲಂಬಿಸಿ ನಿರ್ಭಯಾ ನಿಧಿಯ ಸಾರ್ವಜನಿಕ ಖಾತೆಯಲ್ಲಿ ಈಗಾಗಲೇ ಲಭ್ಯವಿರುವ ಬಾಕಿ ಮೊತ್ತವನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ ಎಂದು ಅವರು ಹೇಳಿದರು.

***************

ಕಳೆದ ಐದು ವರ್ಷಗಳಲ್ಲಿ ಸಮುದಾಯ ರೇಡಿಯೋ ಆಂದೋಲನವನ್ನು ಬೆಂಬಲಿಸುವ ಮೂಲಕ ಒಟ್ಟು ೨೧೨ ಹೊಸ ಸಮುದಾಯ ರೇಡಿಯೋ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಇಂದು ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್, ಸರ್ಕಾರವು ೫೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈ ಯೋಜನೆಯನ್ನು ಜಾರಿಗೆ ತರುತ್ತಿದೆ, ಇದು ಅಸ್ತಿತ್ವದಲ್ಲಿರುವ ಮತ್ತು ಹೊಸ ಸಮುದಾಯ ರೇಡಿಯೋ ಕೇಂದ್ರಗಳನ್ನು ಬಲಪಡಿಸಲು ವಿನ್ಯಾಸಗೊಳಿಸಲಾಗಿದೆ ಎಂದರು.

ಒಟ್ಟು ಹೊಸ ರೇಡಿಯೋ ಕೇಂದ್ರಗಳಲ್ಲಿ ೩೫ ಉತ್ತರ ಪ್ರದೇಶದಲ್ಲಿ ಸ್ಥಾಪಿಸಲಾಗಿದೆ. ಕಳೆದ ಐದು ವರ್ಷಗಳಲ್ಲಿ ದೇಶದಲ್ಲಿ ಅಸ್ತಿತ್ವದಲ್ಲಿರುವ ೩೧ ಸಮುದಾಯ ರೇಡಿಯೋ ಕೇಂದ್ರಗಳಿಗೆ ಆರ್ಥಿಕ ನೆರವು ನೀಡಲಾಗಿದೆ ಎಂದು ಡಾ. ಮುರುಗನ್ ಹೇಳಿದರು.

***************

ಮುಂದಿನ ಐದು ವರ್ಷಗಳಲ್ಲಿ ದೇಶಾದ್ಯಂತ ೫೦ ಸಾವಿರ ಸರ್ಕಾರಿ ಶಾಲೆಗಳಲ್ಲಿ ಹೊಸ ಅಟಲ್ ಟಿಂಕರಿಂಗ್ ಲ್ಯಾಬ್‌ಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ.

ರಾಜ್ಯಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗೆ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ನಾವೀನ್ಯತೆಯನ್ನು ಉತ್ತೇಜಿಸಲು ಪ್ರಸ್ತುತ ಶಾಲೆಗಳಲ್ಲಿ ಹತ್ತು ಸಾವಿರ ಅಟಲ್ ಟಿಂಕರಿಂಗ್ ಲ್ಯಾಬ್‌ಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಮುಂಬರುವ ವರ್ಷಗಳಲ್ಲಿ, ದೇಶದಲ್ಲಿ ಶಿಕ್ಷಣವು ಹೆಚ್ಚು ತಂತ್ರಜ್ಞಾನ ಆಧಾರಿತವಾಗಿರುತ್ತದೆ. ೯ ರಿಂದ ೧೨ ನೇ ತರಗತಿಯವರೆಗೆ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಸಂಪರ್ಕವನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು.

***************

ನ್ಯೂ ಚಂಡೀಗಢದ ಮುಲ್ಲನ್‌ಪುರದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಾಳೆ ಭಾರತ ಮತ್ತು ದಕ್ಷಿಣ ಆಫ್ರಿಕಾ ಎರಡನೇ ಟಿ-೨೦ ಪಂದ್ಯ ನಡೆಯಲಿದೆ.

ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪ್ರಾರಂಭವಾಗಲಿದೆ. ನಿನ್ನೆ ರಾತ್ರಿ ಕಟಕ್‌ನ ಬಾರಾಬತಿ ಕ್ರೀಡಾಂಗಣದಲ್ಲಿ ನಡೆದ ಐದು ಪಂದ್ಯಗಳ ಟಿ-೨೦ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ದಕ್ಷಿಣ ಆಫ್ರಿಕಾವನ್ನು ೧೦೧ ರನ್‌ಗಳಿಂದ ಸೋಲಿಸಿತು.

***************

ಲಿವರ್‌ಪೂಲ್‌ನಲ್ಲಿ ನಡೆದ ೨೦೨೫ರ ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಗೆದ್ದ ಭಾರತೀಯ ಮಹಿಳಾ ಬಾಕ್ಸರ್‌ಗಳು ಇಂದು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು.

ಮಹಿಳಾ ಬಾಕ್ಸರ್‌ಗಳು ಅಸಾಧಾರಣ ಪ್ರದರ್ಶನ ನೀಡಿ ರಾಷ್ಟ್ರಕ್ಕೆ ಕೀರ್ತಿ ತಂದಿದ್ದಾರೆ ಎಂದು ದ್ರೌಪದಿ ಮುರ್ಮು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ.

*******ಮುಕ್ತಾಯ*******